## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಹೊರಗುತ್ತಿಗೆ ಮೇಲೆ ಸಿಬ್ಬಂದಿಯನ್ನು ನೇಮಿಸುವ ಬಗ್ಗೆ ಸೂಚನೆಗಳು.

**ಓದಲಾಗಿದೆ:** ಸರ್ಕಾರದ ಆದೇಶ ಸಂಖ್ಯೆ: ಆಇ 3 ಟಿಎಫ್ ಪಿ 2018, 14.05.2018.

*********

**ಪ್ರಸ್ತಾವನೆ:**

ಮೇಲೆ ಓದಲಾದ ಆದೇಶದಲ್ಲಿ ಇಲಾಖಾ ಮುಖ್ಯಸ್ಥರು ಹಾಗೂ ವಿವಿಧ ಹಂತದ ಅಧಿಕಾರಿಗಳಿಗೆ ಆರ್ಥಿಕ ಅಧಿಕಾರ ಪ್ರತ್ಯಾಯೋಜನೆಯನ್ನು ಮಾಡಲಾಗಿದೆ. ಸದರಿ ಆದೇಶದ ಕ್ರ.ಸಂ.26 ರಲ್ಲಿ ಇಲಾಖಾ ಮುಖ್ಯಸ್ಥರಿಗೆ ಖಾಲಿ ಹುದ್ದೆಗಳ ಮಿತಿಗೊಳಪಟ್ಟು ಮತ್ತು ಆಯವ್ಯಯ ಲಭ್ಯತೆಗೊಳಪಟ್ಟು ಆರ್ಥಿಕ ಇಲಾಖೆಯು ಅನುಮತಿ ನೀಡಿದ ಹುದ್ದೆಗಳಿಗೆದುರಾಗಿ ಹೊರಗುತ್ತಿಗೆ ಮೇಲೆ ಮಾನವ ಸಂಪನ್ಮೂಲ ಪಡೆದುಕೊಳ್ಳಲು ಪೂರ್ಣ ಅಧಿಕಾರ ನೀಡಲಾಗಿದೆ.

2. ಆದರೆ, ಕೆಲವು ಇಲಾಖೆಗಳು ಹಾಗೂ ನಿಗಮ, ಮಂಡಳಿ, ಪ್ರಾಧಿಕಾರ, ವಿಶ್ವವಿದ್ಯಾಲಯಗಳು ಇನ್ನಿತರ ಅನುದಾನಿತ ಸಂಸ್ಥೆಗಳು ಮಂಜೂರಾದ ಹುದ್ದೆಗಳಿಗೂ ಮೀರಿ ಆಯವ್ಯಯವನ್ನು ಒದಗಿಸಿಕೊಂಡಿರದಿದ್ದರೂ ಹೊರಗುತ್ತಿಗೆ ಮೇಲೆ ನೇಮಿಸಿಕೊಂಡು ನಂತರ ಹೆಚ್ಚುವರಿ ಅನುದಾನಕ್ಕಾಗಿ ಆರ್ಥಿಕ ಇಲಾಖೆಯನ್ನು ಸಂಪರ್ಕಿಸುತ್ತಿರುವುದು ಗಮನಕ್ಕೆ ಬಂದಿದೆ. ಇದರಿಂದ, ಹೊರಗುತ್ತಿಗೆ ಮೇಲೆ ಸಿಬ್ಬಂದಿಯನ್ನು ನೇಮಿಸಿಕೊಳ್ಳುವ ಬಗ್ಗೆ ಯಾವುದೇ ನಿಯಂತ್ರಣ ಇಡಲು ಸಾಧ್ಯವಾಗುತ್ತಿಲ್ಲವಾದ್ದರಿಂದ, ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಆಇ 6 ಟಿ.ಎಫ್.ಪಿ 2018, ಬೆಂಗಳೂರು,**
**ದಿನಾಂಕ:29-12-2018.**

ಸರ್ಕಾರದ ಆದೇಶ ಸಂಖ್ಯೆ: ಆಇ 3 ಟಿಎಫ್ ಪಿ 2018, ದಿ:14.05.2018 ರ ಕ್ರ.ಸಂ.26 ರಲ್ಲಿ ಇಲಾಖಾ ಮುಖ್ಯಸ್ಥರಿಗೆ ಹೊರಗುತ್ತಿಗೆ ಮೇಲೆ ಮಾನವ ಸಂಪನ್ಮೂಲವನ್ನು ತೆಗೆದುಕೊಳ್ಳಲು ಪ್ರತ್ಯಾಯೋಜಿಸಿರುವ ಪೂರ್ಣ **ಅಧಿಕಾರವನ್ನು ಹಿಂಪಡೆಯಲಾಗಿದೆ.**

2. ಇನ್ನು ಮುಂದೆ ಎಲ್ಲಾ ಇಲಾಖೆಗಳು ಗ್ರೂಪ್-ಡಿ, ಬೆರಳಚ್ಚುಗಾರರು/ಡಿಇಓ, ವಾಹನ ಚಾಲಕರ ಖಾಲಿ ಹುದ್ದೆಗಳಿಗೆ ಎದುರಾಗಿ ಹೊರಗುತ್ತಿಗೆ ಮೇಲೆ ನೇಮಿಸಿಕೊಳ್ಳಲು ಮಂಜೂರಾದ ಹುದ್ದೆಗಳು ಹಾಗೂ ಖಾಲಿ ಹುದ್ದೆಗಳ ವಿವರಗಳನ್ನು ಆರ್ಥಿಕ ಇಲಾಖೆಗೆ ಸಲ್ಲಿಸಿ ಕಡ್ಡಾಯವಾಗಿ ಆರ್ಥಿಕ ಇಲಾಖೆಯ ಅನುಮತಿ ಪಡೆಯುವಂತೆ ಆದೇಶಿಸಿದೆ.

3. ನಿಗಮ, ಮಂಡಳಿ, ಪ್ರಾಧಿಕಾರ, ವಿಶ್ವವಿದ್ಯಾಲಯಗಳು ಹಾಗೂ ಇನ್ನಿತರ ಅನುದಾನಿತ ಸಂಸ್ಥೆಗಳಿಗೂ ಸಹ ಈ ಆದೇಶವು ಅನ್ವಯವಾಗುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಪವನ್ ಕುಮಾರ್ ಮಾಲಪಾಟಿ)
ಸರ್ಕಾರದ ಉಪ ಕಾರ್ಯದರ್ಶಿ (ಆ ಮತ್ತು ಸಂ),
ಆರ್ಥಿಕ ಇಲಾಖೆ.

**ಇವರಿಗೆ:**

1) ಪ್ರಧಾನ ಮಹಾಲೇಖಪಾಲರು, ಲೆಕ್ಕಪತ್ರಗಳು ಮತ್ತು ಹಕ್ಕುಗಳು, ಕರ್ನಾಟಕ, ರೆಸಿಡೆನ್ಸಿ ರಸ್ತೆ, ಅಂಚೆಚೀಲ ಸಂಖ್ಯೆ.5329/5369, ಬೆಂಗಳೂರು-1.
2) ಪ್ರಧಾನ ಮಹಾಲೇಖಪಾಲರು, ಲೆಕ್ಕತನಿಖೆ-1, ಕರ್ನಾಟಕ, ರೆಸಿಡೆನ್ಸಿ ರಸ್ತೆ, ಅಂಚೆಚೀಲ ಸಂಖ್ಯೆ.5329/5369, ಬೆಂಗಳೂರು-1.
3) ಪ್ರಧಾನ ಮಹಾಲೇಖಪಾಲರು, ಲೆಕ್ಕತನಿಖೆ-2, ಕರ್ನಾಟಕ, ರೆಸಿಡೆನ್ಸಿ ರಸ್ತೆ, ಅಂಚೆಚೀಲ ಸಂಖ್ಯೆ.5329/5369, ಬೆಂಗಳೂರು-1.
4) ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು
5) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ಖಜಾನೆ-2), 5ನೇ ಮಹಡಿ, ವಾಣಿಜ್ಯ ತೆರಿಗೆ ಸಂಕೀರ್ಣ, ಗಾಂಧಿನಗರ.
6) ಎಲ್ಲಾ ಇಲಾಖೆಯ ಮುಖ್ಯಸ್ಥರುಗಳಿಗೆ
7) ಎಲ್ಲಾ ಜಿಲ್ಲಾಧಿಕಾರಿಗಳು
8) ಎಲ್ಲಾ ಜಿಲ್ಲಾ ಪಂಚಾಯತ್ ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು
9) ರಾಜ್ಯದ ಎಲ್ಲಾ ನಿಗಮ, ಮಂಡಳಿ, ಪ್ರಾಧಿಕಾರ, ವಿಶ್ವವಿದ್ಯಾಲಯಗಳು
10) ನಿರ್ದೇಶಕರು, ಖಜಾನೆ ಇಲಾಖೆ, ಪೋಡಿಯಂ ಬ್ಲಾಕ್, ಬೆಂಗಳೂರು.
11) ಆರ್ಥಿಕ ಇಲಾಖೆಯ ಜಂಟಿ/ ಉಪ ಕಾರ್ಯದರ್ಶಿಗಳು
12) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.